# ಕರ್ನಾಟಕ ಸರ್ಕಾರದ ನಡವಳಿಗಳು

(3)

ವಿಷಯ: ಅಲ್ಪಸಂಖ್ಯಾತರಿಗಾಗಿ ಹೊಸ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು ಮಂಜೂರು ಮಾಡುವ ಕುರಿತು.

ಓದಲಾಗಿದೆ: 1. ಆ.ಇ 258 ವೆಚ್ಚ-3/2006 ದಿ:21.11.2006

2. ನಿರ್ದೇಶಕರು, ಅಲ್ಪಸಂಖ್ಯಾತರ ಇಲಾಖೆ ಇವರ ಏಕಕಡತ ಸಂಖ್ಯೆ: ಅಸಂನಿ/ಸಿಆರ್-78/06-07 ದಿನಾಂಕ:06-01-2007

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿ ದಿನಾಂಕ 21.11.2006ರಂದು ಆರ್ಥಿಕ ಇಲಾಖೆಯ ಪ್ರಧಾನ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಅಲ್ಪಸಂಖ್ಯಾತರ ಈ ಯೋಜನೆ ಕುರಿತಂತೆ (1)ಅನುದಾನಿತ ಅಲ್ಪಸಂಖ್ಯಾತರ ಸಂಸ್ಥೆಗಳಲ್ಲಿ ಆಧುನಿಕ ವಿಷಯಗಳ ಬಗ್ಗೆ ಶಿಕ್ಷಣ (2)ಅಲ್ಪಸಂಖ್ಯಾತರಿಗೆ ಸಮೂಹ ವಸತಿ ನಿರ್ಮಾಣ ಯೋಜನೆಯ ಈ ಎರಡು ಯೋಜನೆಗಳನ್ನು ಕೈಬಿಟ್ಟು ಅದರ ಬದಲಾಗಿ 10 ಮೊರಾರ್ಜಿ ದೇಸಾಯಿ ವಸತಿಶಾಲೆಗಳನ್ನು ಪ್ರಾರಂಭಿಸಲು ಪ್ರಸ್ತಾವನೆಯನ್ನು ಸಲ್ಲಿಸುವಂತೆ ತೀರ್ಮಾನಿಸಲಾಗಿದೆ.

ಅಂತೆಯೇ ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿ ನಿರ್ದೇಶಕರು, ಅಲ್ಪಸಂಖ್ಯಾತರ ಇಲಾಖೆ ಈ ಕೆಳಕಂಡ 8 ಜಿಲ್ಲೆಗಳಲ್ಲಿ 2007-08ರಿಂದ ಹೊಸ ಮೊರಾರ್ಜಿ ದೇಸಾಯಿ ವಸತಿಶಾಲೆಗಳನ್ನು ಪ್ರಾರಂಭಿಸಲು ಪ್ರಸ್ತಾಪಿಸಿರುತ್ತಾರೆ. ಅದರಂತೆ ಈ ಕೆಳಕಂಡಂತೆ ಆದೇಶ ಮಾಡಿದೆ.

## ಸರ್ಕಾರದ ಆದೇಶ ಸಂಖ್ಯೆ: ಸಕಇ 8 ಅಸಂಯೋ 2007
## ಬೆಂಗಳೂರು, ದಿನಾಂಕ:08-03-2007.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ನು ಪರಿಶೀಲಿಸಿದ ಸರ್ಕಾರ ಅಲ್ಪಸಂಖ್ಯಾತರ ಮಕ್ಕಳ ಶೈಕ್ಷಣಿಕ ಹಿತದೃಷ್ಟಿಯಿಂದ ಈ ಕೆಳಕಂಡ ಜಿಲ್ಲೆಗಳಲ್ಲಿ ಜಾರಿಗೆ ಬರುವಂತೆ ಆಂಗ್ಲ ಮಾಧ್ಯಮ(ಒಂದು ಉರ್ದು ಭಾಷಾ ಶಿಕ್ಷಕರೊಂದಿಗೆ) ಅಲ್ಪಸಂಖ್ಯಾತರ ಹೆಣ್ಣುಮಕ್ಕಳ ಮೊರಾರ್ಜಿ ದೇಸಾಯಿ ವಸತಿಶಾಲೆಗಳನ್ನು 2007-08ನೇ ಶೈಕ್ಷಣಿಕ ವರ್ಷದಿಂದ ಪ್ರಾರಂಭಿಸಲು ಮಂಜೂರಾತಿ ನೀಡಲಾಗಿದೆ.

| | |
|---|---|
| 1 | ಬೆಂಗಳೂರು ಉತ್ತರ ತಾಲ್ಲೂಕು, ಬೆಂಗಳೂರು ಜಿಲ್ಲೆ |
| 2 | ಬಿಜಾಪುರ ತಾಲ್ಲೂಕು, ಬಿಜಾಪುರ ಜಿಲ್ಲೆ |
| 3 | ಉಳ್ಳಾಲ, ಮಂಗಳೂರು ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ |
| 4 | ವಿರಾಜಪೇಟೆ, ಕೊಡಗು ಜಿಲ್ಲೆ |
| 5 | ನಾಗಮಂಗಳ ತಾಲ್ಲೂಕು, ಮಂಡ್ಯ ಜಿಲ್ಲೆ |
| 6 | ಸಿರಾ ತಾಲ್ಲೂಕು, ತುಮಕೂರು ಜಿಲ್ಲೆ |
| 7 | ಬ್ರಹ್ಮಾವರ, ಉಡುಪಿ ತಾಲ್ಲೂಕು, ಉಡುಪಿ ಜಿಲ್ಲೆ |
| 8 | ದಾವಣಗೆರೆ ತಾಲ್ಲೂಕು, ದಾವಣಗೆರೆ ಜಿಲ್ಲೆ |

transfer to hassan - 11-12